ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ: 6-5-2017

# ಪತ್ರಿಕಾ ಆಮಂತ್ರಣ

**ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸ್ವೀಕಾರ ಕೇಂದ್ರ, ಬೆಂಗಳೂರು ಇಲ್ಲಿನ ನಿವಾಸಿ ಚೈತ್ರಾ ಕೆ.ಎಸ್. ಹಾಗೂ ಕೆ.ಆರ್. ಪುರದ ರೂಪೇಶ್‌ಕುಮಾರ್ ಕೆ.ಸಿ. ಅವರ ವಿವಾಹ ಸಮಾರಂಭ:**

**ದಿನಾಂಕ: 8-5-2017 ರಂದು ಸೋಮವಾರ**

**ಮೂಹೂರ್ತ ಬೆಳಗ್ಗೆ 9 ರಿಂದ 10-30 ಗಂಟೆವರೆಗೆ**

**ಆರತಕ್ಷತೆ: ಬೆಳಗ್ಗೆ 11 ರಿಂದ ಮಧ್ಯಾಹ್ನ 1-00 ಗಂಟೆವರೆಗೆ**

**ಸ್ಥಳ; ಗಣಪತಿ ದೇವಾಲಯ, ಸುಧಾರಣಾ ಸಂಸ್ಥೆಗಳ ಆವರಣ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಹೊಸೂರು ರಸ್ತೆ, ಕಿದ್ವಾಯಿ ಆಸ್ಪತ್ರೆ ಸಮೀಪ, ಬೆಂಗಳೂರು**

# ಪತ್ರಿಕಾ ಪ್ರಕಟಣೆ

## ಜಿಲ್ಲಾ ಪ್ರಗತಿ ಪರಿಶೀಲನಾ ಕಾರ್ಯಕ್ರಮಗಳಿಗೆ ಪ್ರತಿ ಮಾಹೆ ಕಡ್ಡಾಯವಾಗಿ ಎರಡು ದಿನಗಳನ್ನು ಮೀಸಲಿರಿಸಿ : ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಮುಖ್ಯಮಂತ್ರಿ ಸೂಚನೆ

ಬೆಂಗಳೂರು, ಮೇ 6 ( ಕರ್ನಾಟಕ ವಾರ್ತೆ) :

ಪ್ರತಿ ತಿಂಗಳೂ ಒಂದು ದಿನ ಜಿಲ್ಲೆಯ ಎಲ್ಲಾ ಅಭಿವೃದ್ಧಿ ಯೋಜನೆಗಳ ಪ್ರಗತಿ ಪರಿಶೀಲನೆ ಮಾಡಿ. ಅಂದು ರಾತ್ರಿ ಅಲ್ಲೇ ವಾಸ್ತವ್ಯ ಹೂಡಿ. ನಂತರ, ಮರುದಿನ ಕ್ಷೇತ್ರ ಭೇಟಿ ನೀಡಿ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿನ ಅಭಿವೃದ್ಧಿ ಕಾಮಗಾರಿಗಳು ಹಾಗೂ ಇಲಾಖಾ ಕಾರ್ಯ ಚಟುವಟಿಕೆಗಳ ಸಮಗ್ರ ಪರಿಶೀಲನೆ ನಡೆಸಿ. ಇನ್ನು ಮುಂದೆ ಜಿಲ್ಲಾ ಪ್ರಗತಿ ಪರಿಶೀಲನಾ ಕಾರ್ಯಕ್ರಮಗಳಿಗೆ ಪ್ರತಿ ಮಾಹೆ ಕಡ್ಡಾಯವಾಗಿ ಎರಡು ದಿನಗಳನ್ನು ಮೀಸಲಿರಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಿ ಇಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚನೆ ನೀಡಿದರು.

ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಸಭೆಯ ಅಧ್ಯಕ್ಷತೆ ವಹಿಸಿ, ಜಿಲ್ಲೆಯಲ್ಲಿನ ಕಾರ್ಯಕ್ರಮಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡುತ್ತಿದ್ದರು.

ಜಿಲ್ಲಾಧಿಕಾರಿಗಳಾಗಿ ಹಾಗೂ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದ ಅನುಭವದ ಸದ್ಬಳಕೆಯನ್ನು ಮಾಡಿಕೊಳ್ಳಲು ತಮ್ಮನ್ನು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಲಾಗಿದೆ. ಅಭಿವೃದ್ಧಿ ಯೋಜನೆಗಳು ಹಾಗೂ ಕಾರ್ಯಕ್ರಮಗಳು ನಿಗದಿತ ಅವಧಿಯಲ್ಲಿ ಹಾಗೂ ನಿರೀಕ್ಷಿಸಿದಂತೆಯೇ ಅನುಷ್ಠಾನವಾಗಬೇಕು. ಅದಕ್ಕಾಗಿ ಜಿಲ್ಲೆಗಳಿಗೆ ಮೇಲಿಂದ ಮೇಲೆ ಭೇಟಿ ನೀಡಿ, ಅವುಗಳ ಹಂತ ಹಂತದ ಪ್ರಗತಿ ಪರಿಶೀಲನೆ ನಡೆಸಿ, ಸರ್ಕಾರದ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಕೆಳ ಹಂತದ ಅಧಿಕಾರಿಗಳಿಗೆ ಮಾರ್ಗದರ್ಶನ ಮಾಡಿ. ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಬದಲಾವಣೆ ಅವಶ್ಯಕತೆ ಇದ್ದಲ್ಲಿ, ಸಲಹೆ ಕೊಡಿ ಎಂದು ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ತಿಳಿಸಿದರು.

ರಾಜ್ಯದಲ್ಲಿ ಹಿಂಗಾರು ಹಂಗಾಮಿನಲ್ಲಿ 160 ತಾಲ್ಲೂಕುಗಳು ಭೀಕರ ಬರ ಪರಿಸ್ಥಿತಿ ಎದುರಿಸುತ್ತಿವೆ. ಗ್ರಾಮಾಂತರ ಪ್ರದೇಶದಲ್ಲಿ ಜನ ಮತ್ತು ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸುವತ್ತ, ಜನರಿಗೆ ಉದ್ಯೋಗ ದೊರಕಿಸಿಕೊಡುವತ್ತ, ಜಾನುವಾರು ರಕ್ಷಣೆಯತ್ತ ಒತ್ತು ನೀಡಿ, ಮೇಲ್ವಿಚಾರಣೆ ನಡೆಸಿ. ಮೇವು ಬ್ಯಾಂಕ್ ಹಾಗೂ ಗೋಶಾಲೆ ಸ್ಥಾಪನೆ ಮತ್ತು ನಿರ್ವಹಣೆಯ ಬಗ್ಗೆ ನಿಗಾ ವಹಿಸಿ. ಗೋಶಾಲೆಗಳಲ್ಲಿ ಮೇವು-ಔಷಧಿಗಳು ಲಭ್ಯವಿದೆಯೇ ? ಜಾನುವಾರುಗಳಿಗೆ ನೀರು ಹಾಗೂ ನೆರಳು ಇದೆಯೇ ? ಎಂಬುದನ್ನು ಖುದ್ದು ಪರಿಶೀಲಿಸಿ.

ಜಾನುವಾರು ಗಣತಿ

ಬರದ ಹಿನ್ನೆಲೆಯಲ್ಲಿ ಗ್ರಾಮ ಮಟ್ಟದಲ್ಲಿ ಜಾನುವಾರು ಗಣತಿ ನಡೆಯಬೇಕು ಎಂದು ಸೂಚಿಸಿದ್ದೆ. ಪ್ರತಿ ಹಳ್ಳಿಯಲ್ಲಿ ಎಷ್ಟು ದನಕರುಗಳಿವೆ ? ಎಮ್ಮೆಗಳಿವೆ ? ಕುರಿ-ಮೇಕೆಗಳಿವೆ ? ಎಂಬ ಗ್ರಾಮವಾರು ಮಾಹಿತಿ ಕಲೆ ಹಾಕಿ. ಮೇವು ಲಭ್ಯತೆ ಎಷ್ಟಿದೆ ? ಬರಗಾಲ ಮುಗಿಯುವವರೆಗೆ ಅಗತ್ಯವಿರುವ ಮೇವಿನ ಪ್ರಮಾಣ ಎಷ್ಟು ? ಎಂದು ಅಂದಾಜಿಸಲು ಈಗಾಗಲೇ ನಿರ್ದೇಶನ ನೀಡಿದ್ದೇನೆ. ಗ್ರಾಮ ಲೆಕ್ಕಿಗರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ಪಶು ಸಂಗೋಪನಾ ಇಲಾಖೆಯ ಅಧಿಕಾರಿಯನ್ನು ಒಳಗೊಂಡ ತಂಡ ಈ ಕಾರ್ಯವನ್ನು ಎಷ್ಟರ ಮಟ್ಟಿಗೆ ಮಾಡಿದೆ ಎಂಬುದರ ವಿವರ ಸಲ್ಲಿಸಿ. ಜಾನುವಾರುಗಳಿಗೆ ಕುಡಿಯುವ ನೀರು ಒದಗಿಸಲು ಹಾಗೂ ಮೇವು ಬೆಳೆಸಲು ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿ ಎಂದು ಮುಖ್ಯಮಂತ್ರಿ ಪ್ರಶ್ನೆಗಳ ಮಳೆಗೆರೆದರು.

ಮಾನವೀಯತೆಯ ಸ್ಪರ್ಶ

ರೈತರ ಆತ್ಮಹತ್ಯೆ ಪ್ರಕರಣಗಳಲ್ಲಿ ಸರ್ಕಾರಿ ಮಾನದಂಡಗಳಂತೆ ಎಲ್ಲಾ ಕುಟುಂಬಗಳಿಗೂ ಪರಿಹಾರ ನೀಡಲಾಗಿದೆಯೇ ? ಸಂತ್ರಸ್ತ ಕುಟುಂಬಗಳಿಗೆ ಪಿಂಚಣಿ ಸೌಲಭ್ಯ ವಿಸ್ತರಿಸಲಾಗಿದೆಯೇ ? ಸಂತ್ರಸ್ತರ ಅವಲಂಭಿತರಿಗೆ ಶಿಕ್ಷಣ ಒದಗಿಸುವ ಸರ್ಕಾರದ ಭರವಸೆ ಸಾಕಾರಗೊಳ್ಳುತ್ತಿದೆಯೇ ? ಸಂತ್ರಸ್ತರ ಕುಟುಂಬಗಳಿಗೆ ವೈದ್ಯಕೀಯ ಸೌಲಭ್ಯ ವಿಸ್ತರಿಸಲಾಗುತ್ತಿದೆಯೇ ? ಎಂಬುದರ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಿ. ಇಂತಹ ಪ್ರಕರಣಗಳ ವಿಲೇವಾರಿಯಲ್ಲಿ ಮಾನವೀಯತೆಯ ಸ್ಪರ್ಶವಿರಲಿ ಎಂದು ಸಿದ್ದರಾಮಯ್ಯ ಅವರು ಸಲಹೆ ಮಾಡಿದರು.

ಬರದ ಹಿನ್ನೆಲೆಯಲ್ಲಿ ಕೃಷಿ ಭಾಗ್ಯ ಯೋಜನೆಯಲ್ಲಿ ನಿಗದಿತ ಗುರಿಯಂತೆ ಕೃಷಿ ಹೊಂಡಗಳನ್ನು ನಿರ್ಮಿಸಲಾಗಿದೆಯೇ ? ಬಹು ಗ್ರಾಮ ಕುಡಿಯುವ ನೀರು ಯೋಜನೆ, ಕೊಳವೆ ನೀರು ಸರಬರಾಜು ಯೋಜನೆಗಳಲ್ಲಿನ ಪ್ರಗತಿ ಪರಿಶೀಲನೆ ಅಗತ್ಯ. ಕೆರೆ ಸಂಜೀವಿನಿ ಯೋಜನೆ ಮತ್ತಷ್ಟು ಚುರುಕುಗೊಳ್ಳಬೇಕು. ನಮ್ಮ ಗ್ರಾಮ – ನಮ್ಮ ರಸ್ತೆ ಯೋಜನೆಯ ವೇಗ ಮತ್ತಷ್ಟು ಹೆಚ್ಚಬೇಕು. ಸ್ಮಶಾನಕ್ಕೆ ಆದ್ಯತೆಯ ಮೇರೆಗೆ ಜಾಗ ಒದಗಿಸಲು ಸೂಚಿಸಿದ್ದೆ. ಅವುಗಳನ್ನು ಪರಿಶೀಲಿಸಿರುವಿರಾ ? ಯಾವ ಜಿಲ್ಲೆಗಳಲ್ಲಿ ಇನ್ನೂ ಒದಗಿಸಿಲ್ಲ ? ಏಕೆ ಒದಗಿಸಿಲ್ಲ ? ಎಂಬ ಬಗ್ಗೆ ಸರ್ಕಾರಕ್ಕೆ ಮಾಹಿತಿ ಒದಗಿಸಿ. ಅಂತೆಯೇ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಿಗೂ ಸ್ಥಳ ಒದಗಿಸುವ ಕಾರ್ಯದ ವಿವರ ಸಾದರಪಡಿಸಿ.

ಸರ್ಕಾರಿ ಭೂಮಿ ಅತಿಕ್ರಮಣದ ಪ್ರಕರಣಗಳ ಬಗ್ಗೆ ಗಮನಹರಿಸಿರುವಿರಾ ? ಎಷ್ಟು ಪ್ರಕರಣಗಳಲ್ಲಿ ಜಮೀನು ತೆರವುಗೊಳಿಸಿರುವಿರಿ ? ಎಲ್ಲೆಲ್ಲಿ ಜಮೀನು ಸ್ವಾಧೀನ ಪಡಿಸಿಕೊಂಡಿದ್ದೀರಿ ? ಸ್ವಾಧೀನ ಪಡಿಸಿಕೊಂಡಿರುವ ಜಮೀನನ್ನು ರಕ್ಷಿಸಲು ಏನು ಕ್ರಮ ಕೈಗೊಂಡಿದ್ದೀರಿ ? ಎಂಬುದನ್ನು ಪಂಚಾಯತ್ ಕಚೇರಿಗಳಲ್ಲಿನ ಸೂಚನಾ ಫಲಕದಲ್ಲಿ ಪ್ರದರ್ಶಿಸಲು ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಸೂಚಿಸಲಾಗಿತ್ತು ? ಈ ಬಗ್ಗೆ ಪರಿಶೀಲಿಸಿರುವಿರಾ ?

**ಮೊಲ ಮತ್ತು ಆಮೆ !**

ಮನೆಗಳ ನಿರ್ಮಾಣದಲ್ಲಿ ಕೊಪ್ಪಳ ಜಿಲ್ಲೆ ಮೊದಲ ಸ್ಥಾನದಲ್ಲಿದೆ. ಆದರೆ ಚಿಕ್ಕಬಳ್ಳಾಪುರ ಮೂವತ್ತನೇ ಸ್ಥಾನದಲ್ಲಿದೆ. ಸರ್ಕಾರದ ಯೋಜನೆಗಳು ಕೆಲವು ಜಿಲ್ಲೆಗಳಲ್ಲಿ ನೂರಕ್ಕೆ ನೂರು ಅನುಷ್ಠಾನಗೊಂಡಿದೆ. ಮತ್ತೆ ಕೆಲವು ಜಿಲ್ಲೆಗಳಲ್ಲಿ ನಿಗದಿತ ಗುರಿಗೆ ಪ್ರತಿಯಾಗಿ ಶೇಕಡಾ 60 ರಷ್ಟು ಅಥವಾ ಶೇಕಡಾ 70 ರಷ್ಟು ಮಾತ್ರ ಸಾಧನೆಯಾಗಿದೆ. ಎಲ್ಲೆಡೆ ಒಂದೇ ರೀತಿಯ ವ್ಯವಸ್ಥೆ ಹಾಗೂ ಒಂದೇ ರೀತಿಯ ಸಮಸ್ಯೆಗಳಿರುವಾಗ, ಒಂದೆಡೆ ಕಾರ್ಯಕ್ರಮಗಳನ್ನು ಸಾಕಾರಗೊಳಿಸಲು ಸಾಧ್ಯವಾಗುವುದಾದರೆ, ಮತ್ತೊಂದೆಡೆ ಸಾಧ್ಯವಾಗದಿರಲು ಕಾರಣವೇನು ? ಒಂದೆಡೆ ಮೊಲದ ಜಾತಿಯ, ಮತ್ತೊಂದೆಡೆ ಆಮೆ ಜಾತಿಯ ಅಧಿಕಾರಿಗಳಿದ್ದಾರೆಯೇ ? ಈ ಬಗ್ಗೆ ಗಮನಹರಿಸಿ. ಸರಿಪಡಿಸಿ ಎಂದು ಮುಖ್ಯಮಂತ್ರಿ ಅಧಿಕಾರಿಗಳಿಗೆ ಆದೇಶಿಸಿದರು.

**ಹಠಾತ್ ಭೇಟಿ**

ಅನ್ನಭಾಗ್ಯ ಯೋಜನೆಯಡಿ ಏಳು ಕೆ ಜಿ ಅಕ್ಕಿ ಕೊಡುತ್ತಿರುವ ಬಗ್ಗೆ ಪರಿಶೀಲಿಸಿ. ಸಪ್ರಮಾಣದಲ್ಲಿ ಒದಗಿಸುತ್ತಿದ್ದಾರೆಯೇ ? ಗುಣಮಟ್ಟದಲ್ಲಿ ವ್ಯತ್ಯಾಸವಿದೆಯೇ ? ಎಂಬುದನ್ನು ಗಮನಿಸಿ ವಸತಿ ನಿಲಯಗಳಿಗೆ ಹಠಾತ್ ಭೇಟಿ ನೀಡಿ ಪರಿಶೀಲಿಸಿ. ವಿದ್ಯಾರ್ಥಿಗಳಿಗೆ ನೀಡುತ್ತಿರುವ ಆಹಾರದ ಗುಣ ಮಟ್ಟ ಪರಿಶೀಲಿಸಿ. ತಹಶೀಲ್ದಾರ್ ಕಚೇರಿಗೆ ಭೇಟಿ ನೀಡಿ. ಅಲ್ಲಿನ ವ್ಯವಸ್ಥೆಗಳನ್ನು ಸುಧಾರಿಸಿ. ಕರ್ನಾಟಕವು ನಿಗಧಿತ ಅವಧಿಗೂ ಮುನ್ನ ಬಯಲು ಬಹಿರ್ದೆಸೆ ಮುಕ್ತ ರಾಜ್ಯವಾಗಬೇಕು. ಈ ನಿಟ್ಟಿನಲ್ಲಿ ಕಾಳಜಿವಹಿಸಿ ಕಾರ್ಯ ನಿರ್ವಹಿಸಿ.

**ಲೋಕೋಪಯೋಗಿ ಇಂಜಿನಿಯರ್‌ಗಳಿಗೆ ಸ್ಥಳೀಯ ಸಂಸ್ಥೆಗಳ ಹೆಚ್ಚುವರಿ ಜವಾಬ್ದಾರಿ**

ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ, ಅದರಲ್ಲೂ ವಿಶೇಷವಾಗಿ ಈಶಾನ್ಯ ಕರ್ನಾಟಕದ ಜಿಲ್ಲೆಗಳಲ್ಲಿನ ಸ್ಥಳೀಯ ಸಂಸ್ಥೆಗಳಲ್ಲಿ ಕಿರಿಯ, ಸಹಾಯಕ ಹಾಗೂ ಸಹಾಯಕ ಕಾರ್ಯ ಪಾಲಕ ಇಂಜಿನಿಯರ್‌ಗಳ ಹುದ್ದೆಗಳು ಅಧಿಕ ಸಂಖ್ಯೆಯಲ್ಲಿ ಖಾತಿ ಇರುವ ಹಿನ್ನೆಲೆಯಲ್ಲಿವೀ ಕೊರತೆಯನ್ನು ಸರಿದೂಗಿಸಲು ಸ್ಥಳೀಯ ಸಂಸ್ಥೆಗಳಲ್ಲಿನ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನಕ್ಕಾಗಿ ಲೋಕೋಪಯೋಗಿ ಇಲಾಖೆಯ ಇಂಜಿನಿಯರ್‌ಗಳಿಗೆ ಹೆಚ್ಚುವರಿ ಜವಾಬ್ದಾರಿ ನಿರ್ವಹಿಸಲು ಸೂಚಿಸಲು ಮುಖ್ಯಮಂತ್ರಿ ನಿರ್ದೇಶನ ನೀಡಿದರು.

ಮೇ 13 ರಂದು ಚಿತ್ರದುರ್ಗದಲ್ಲಿ ರಾಜ್ಯ ಸರ್ಕಾರದ ವತಿಯಿಂದ ಸವಲತ್ತು ವಿತರಣಾ ಕಾರ್ಯಕ್ರಮ ನಡೆಯುತ್ತಿದೆ. ವಿವಿಧ ಇಲಾಖೆಗಳು ಬೆಂಗಳೂರು ವಿಭಾಗದ ಎಲ್ಲಾ ಒಂಭತ್ತು ಜಿಲ್ಲೆಗಳ ವ್ಯಾಪ್ತಿಯ ಫಲಾನುಭವಿಗಳಿಗೆ ಸವಲತ್ತು–ಸೌಲಭ್ಯಗಳನ್ನು ವಿತರಿಸಲಿದೆ. ಈ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಿ. ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದವರ ಮೇಲಿನ ದೌರ್ಜನ್ಯ ಪ್ರಕರಣಗಳಲ್ಲಿ ಶೇಕಡಾ ಎರಡರಷ್ಟು ಕೂಡಾ ಶಿಕ್ಷೆಯಾಗುತ್ತಿಲ್ಲ. ಈ ಬಗ್ಗೆ ತನಿಖಾಧಿಕಾರಿಗಳು ಸರಿಯಾಗಿ ಕಾರ್ಯ ನಿರ್ವಹಿಸುತ್ತಿಲ್ಲ ಎಂಬ ಆರೋಪಗಳು ಕೇಳಿ ಬರುತ್ತಿವೆ. ಈ ಬಗ್ಗೆ ಜಿಲ್ಲಾಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಪ್ರಗತಿ ಪರಿಶೀಲಿಸಬೇಕು. ತಮ್ಮ ಭೇಟಿ ವೇಳೆ ಈ ಬಗ್ಗೆ ವಿಶೇಷ ಗಮನಹರಿಸಿ. ಅರಣ್ಯ ಹಕ್ಕು ಕಾಯಿದೆ ಬಗ್ಗೆ ಕ್ರಮ ಅಗತ್ಯ ಎಂದು ಮುಖ್ಯಮಂತ್ರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಿಗೆ ಸೂಚನೆಗಳನ್ನು ನೀಡಿದರು.

ಅಪನಗದೀಕರಣದ ಪರಿಣಾಮ

ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನದ ಮೇಲೆ ಅಪನಗದೀಕರಣದ ಪರಿಣಾಮವೂ ಬೀರಿದೆ. ಸರ್ಕಾರದ ಖಜಾನೆಯಲ್ಲಿ ಹಾಗೂ ಬ್ಯಾಂಕ್ ಖಾತೆಗಳಲ್ಲಿ ಹಣದ ಲಭ್ಯತೆ ಇದ್ದರೂ ಕೂಡಾ, *ವಹಿವಾಟಿನ ಮೇಲೆ ಆರ್ಥಿಕ ನಿರ್ಬಂಧ ಹೇರಲಾಗಿದೆ* ಎಂದು ತಿಳಿಸಿ, ಕೆಲವು ರಾಷ್ಟ್ರೀಕೃತ ಬ್ಯಾಂಕ್‌ಗಳು ಫಲಾನುಭವಿಗಳು ಹಾಗೂ ಗುತ್ತಿಗೆದಾರರಿಗೆ ನೀಡಿರುವ ಸರ್ಕಾರದ ಚೆಕ್‌ಗಳನ್ನು ಮಾನ್ಯ ಮಾಡುತ್ತಿಲ್ಲ. ಇದು ನಗದು ವ್ಯವಹಾರಕ್ಕೆ ಮಾತ್ರ ಸೀಮಿತವಾಗಿಲ್ಲ. ರಿಯಲ್ ಟೈಮ್ ಗ್ರಾಸ್ ಸೆಟಲ್‌ಮೆಂಟ್ ( ಆರ್ ಟಿ ಜಿ ಎಸ್ ) ಮೂಲಕ ನಿಧಿ ವರ್ಗಾವಣೆಗೂ ಸಮಸ್ಯೆ ಎದುರಾಗಿದೆ. ಇದು ರಾಜ್ಯದ ಬ್ಯಾಂಕ್‌ಗಳಲ್ಲಿ ಅಗತ್ಯವಿರುವ ಪ್ರಮಾಣಕ್ಕಿಂತಲೂ ಕಡಿಮೆ ಪ್ರಮಾಣದಲ್ಲಿ ನಗದು ಪೂರೈಕೆಯಾಗುತ್ತಿದೆ ಎಂಬುದನ್ನು ಸೂಚಿಸುತ್ತದೆ ಎಂಬ ಗಂಭೀರ ಅಂಶವನ್ನು ಅಧಿಕಾರಿಗಳು ಮುಖ್ಯಮಂತ್ರಿಯವರ ಗಮನಕ್ಕೆ ತಂದರು. ಭಾರತೀಯ ರಿಸರ್ವ್ ಬ್ಯಾಂಕ್‌ನ ಅಧಿಕಾರಿಗಳೊಂದಿಗೆ ಕೂಡಲೇ ಮಾತನಾಡಿ, ಅವರ ಉತ್ತರವನ್ನು ತಮ್ಮ ಗಮನಕ್ಕೆ ತನ್ನಿ ಎಂದು ಮುಖ್ಯಮಂತ್ರಿಯವರು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ ಸುಭಾಷ್ ಚಂದ್ರ ಕುಂಟಿಯಾ, ಅಪರ ಮುಖ್ಯ ಕಾರ್ಯದರ್ಶಿ ಕೆ ರತ್ನಪ್ರಭಾ, ಅಭಿವೃದ್ಧಿ ಆಯುಕ್ತರೂ ಹಾಗೂ ಕೃಷಿ ಉತ್ಪನ್ನ ಆಯುಕ್ತರಾದ ಟಿ ಎಂ ವಿಜಯಭಾಸ್ಕರ್, ಆರ್ಥಿಕ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಐ ಎಸ್ ಎನ್ ಪ್ರಸಾದ್, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಆಡಳಿತ ಸುಧಾರಣಾ ವಿಭಾಗದ ಅಪರ ಮುಖ್ಯ ಕಾರ್ಯದರ್ಶಿ ಜಿ. ಕಲ್ಪನಾ, ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳಾದ

**ಎಲ್ ಕೆ ಅತೀಕ್ ಮತ್ತು ತುಷಾರ್ ಗಿರಿನಾಥ್ ಹಾಗೂ ಎಲ್ಲಾ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳೂ ಈ ಸಭೆಯಲ್ಲಿ ಹಾಜರಿದ್ದರು.**

*************

**ಡಿ ಪಿ ಎಂ**

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಮೆ 6 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 07-05-2017ರ** ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಶ್ರೀ. ಸತೀಶ್ ಅಪ್ಪಿಗೆರೆ ಮತ್ತು ತಂಡ, ಚನ್ನಪಟ್ಟಣ, ರಾಮನಗರ ಜಿಲ್ಲೆ ರವರಿಂದ ಜಾನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ **ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ"** ಎಂಬ ಶೀರ್ಷಿಕೆಯಡಿ ಶ್ರೀ. **ಶಾಂತನಂದ ತಿಮ್ಮಣ್ಣ ದಾಸರ ಮತ್ತು ತಂಡ, ಯಲಬುರ್ಗ, ಕೊಪ್ಪಳ ಜಿಲ್ಲೆ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ಸಹಯೋಗದೊಂದಿಗೆ ಮಾದವಿ ಕುಮಾರ್ ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ **ಶ್ರೀವಾಣಿ ವಿದ್ಯಾ ಕೇಂದ್ರ , ಮಾಗಡಿ ರಸ್ತೆ , ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ 09.30ರ ವರೆಗೆ The Central Excise and Service Tax Department, Government of India, Bangalore ರವರ ವತಿಯಿಂದ **GST** ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು **"GST awareness Run"** ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

## ರಾಷ್ಟ್ರಮಟ್ಟದ ಖಾದಿ ಮತ್ತು ಗ್ರಾಮೋದ್ಯೋಗ ವಸ್ತುಪ್ರದರ್ಶನ-2017

**ಬೆಂಗಳೂರು, ಮೆ 6 (ಕರ್ನಾಟಕ ವಾರ್ತೆ)**

ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿಯು ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಮೇ 23 ರವರೆಗೆ ಸ್ವಾತಂತ್ರ್ಯ ಉದ್ಯಾನವನ (ಜನ ಅಂಗಳ) ಗಾಂಧಿ ನಗರ, ಬೆಂಗಳೂರು ಇಲ್ಲಿ ರಾಷ್ಟ್ರಮಟ್ಟದ ವಸ್ತು ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಮೇ 10 ರಿಂದ 12 ರವರೆಗೆ "ಗ್ರಾಫಿಕ್ ಕಲಾ ಕಮ್ಮಟ"

**ಬೆಂಗಳೂರು, ಮೇ 6 (ಕರ್ನಾಟಕ ವಾರ್ತೆ)**

**ಕರ್ನಾಟಕ ಲಲಿತಕಲಾ ಅಕಾಡೆಮಿಯು ಮೇ 10 ರಿಂದ 12 ರವರೆಗೆ "ಗ್ರಾಫಿಕ್ ಕಲಾಕಮ್ಮಟ" ವನ್ನು ವರ್ಣ ಆರ್ಟ್ ಗ್ಯಾಲರಿ, 2ನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನಲ್ಲಿ ಹಮ್ಮಿಕೊಂಡಿದೆ.**

ಈ ಕಮ್ಮಟದ ಉದ್ಘಾಟನಾ ಸಮಾರಂಭವನ್ನು ಮೇ 10 ರಂದು ಬೆಳಿಗ್ಗೆ 11–00 ಗಂಟೆಗೆ ವರ್ಣ ಆರ್ಟ್ ಗ್ಯಾಲರಿ 2ನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ, ಬೆಂಗಳೂರಿನಲ್ಲಿ ಏರ್ಪಡಿಸಲಾಗಿದೆ. ಕನ್ನಡ ಮತ್ತು ಸಂಸ್ಕೃತಿಯ ಇಲಾಖೆಯ ಜಂಟಿ ನಿರ್ದೇಶಕ ಅಶೋಕ ಎನ್. ಚಲವಾದಿ ಅವರು ಕಮ್ಮಟದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ.

ಸಾಹಿತಿ ಹಾಗೂ ಚಲನಚಿತ್ರ ನಿರ್ದೇಶಕ ನಾಗತಿಹಳ್ಳಿ ಚಂದ್ರಶೇಖರ್ ಅವರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕಮ್ಮಟದ ಅಧ್ಯಕ್ಷತೆಯನ್ನು ಡಾ. ಎಂ.ಎಸ್.ಮೂರ್ತಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ ಅವರು ವಹಿಸಲಿದ್ದಾರೆ.

ಮೇ 12 ರಂದು ಮಧ್ಯಾಹ್ನ 3.00 ಗಂಟೆಗೆ ಸಮಾರೋಪ ಭಾಷಣವನ್ನು ಕರ್ನಾಟಕ ಶಿಲ್ಪಕಲಾ ಅಕಾಡೆಮಿಯ ಮಾಜಿ ಅಧ್ಯಕ್ಷ ವೆಂಕಟಾಚಲಪತಿ ಅವರು ಮಾಡಲಿದ್ದಾರೆ.

ಎಸ್ಎಂ:ಜಿಪಿಆರ್.